# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು – 572 103.

**ದಿನಾಂಕ: 14.02.2023 ರಂದು ಅಪರಾಹ್ನ: 3:30 ಗಂಟೆಗೆ ತುಮಕೂರು ವಿಶ್ವವಿದ್ಯಾನಿಲಯ ಮಾನ್ಯ ಕುಲಪತಿಯವರ ಕೊಠಡಿಯಲ್ಲಿ ನಡೆದ 2022–23ನೇ ಸಾಲಿನ ಪ್ರಥಮ ವಿಶೇಷ ಸಿಂಡಿಕೇಟ್ ಸಭೆಯ ನಡಾವಳಿಗಳು**

**ಆನ್‌ಲೈನ್ ಮುಖಾಂತರ ಸಿಂಡಿಕೇಟ್ ಸಭೆಗೆ ಹಾಜರಾದ ಸದಸ್ಯರು**

| | | |
|---|---|---|
| 1. | ಪ್ರೊ. ವೆಂಕಟೇಶ್ವರಲು ಎಂ, ಮಾನ್ಯ ಕುಲಪತಿಗಳು | ಅಧ್ಯಕ್ಷರು |
| 2. | ಡಾ. ಕೇಶವ, ಹಿರಿಯ ಡೀನರು,<br>ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು | ಸದಸ್ಯರು |
| 3. | ಡಾ. ಪಾಟೀಲ್ ಮಲ್ಲಿಕಾರ್ಜುನ ಬಿ.<br>ಪ್ರಾಧ್ಯಾಪಕರು, ಸ್ನಾತಕೋತ್ತರ ಗಣಿತಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು | ಸದಸ್ಯರು |
| 4. | ಡಾ. ಕೆ ರಾಜೀವಲೋಚನ<br>ನಿವೃತ್ತ ತತ್ವಶಾಸ್ತ್ರ ಉಪನ್ಯಾಸಕರು, ಕೌಸ್ತುಭ 179, ದಾರುಕ ಬಡಾವಣೆ, ಜೋಗಿಮಟ್ಟಿ ರಸ್ತೆ, ಚಿತ್ರದುರ್ಗ–577501. | ಸದಸ್ಯರು |
| 5. | ಡಾ. ಭಾನುಪ್ರಕಾಶ್ ಕೆ.ಎ.<br>ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬುಕ್ಕಾಪಟ್ಟಣ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ–572115. | ಸದಸ್ಯರು |
| 6. | ಡಾ. ರಂಗಪ್ಪ ಎಸ್.ಟಿ.<br>ಪ್ರಾಂಶುಪಾಲರು, ಸರ್ಕಾರಿ ಕಲಾ ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು, ಶಿರಾ ತುಮಕೂರು ಜಿಲ್ಲೆ–572137. | ಸದಸ್ಯರು |
| 7. | ಶ್ರೀಮತಿ ವಸಂತ ಟಿ.ಡಿ.<br>ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಬಿ.ಹೆಚ್. ರಸ್ತೆ, ತುಮಕೂರು ಜಿಲ್ಲೆ–572101. | ಸದಸ್ಯರು |
| 8. | ಡಾ. ಹೆಚ್.ಪಿ. ವೀರಭದ್ರಸ್ವಾಮಿ<br>ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು, ಬಿ.ಹೆಚ್.ರಸ್ತೆ, ತುಮಕೂರು–572101. | ಸದಸ್ಯರು |
| 9. | ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 10. | ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಆನ್‌ಲೈನ್ ಸಭೆಗೆ ಹಾಜರಾಗದ ಸದಸ್ಯರು**

| | | |
|---|---|---|
| 1. | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ರವರು ಅಥವಾ<br>ಇವರ ಪ್ರತಿನಿಧಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| 2. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 3. | ಶ್ರೀ ಕೆ.ಆರ್ ದೇವರಾಜ್<br>S/o ರಾಮಾಂಜಿನಪ್ಪ, ಮನೆ ಸಂಖ್ಯೆ: 202, ಹಳೆ ಅಂಚೆ ಕಚೇರಿ ರಸ್ತೆ, ಸೂಲಿಬೆಲೆ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ–562 129 | ಸದಸ್ಯರು |
| 4. | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 5. | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 6. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |

| | | |
|---|---|---|
| 7. | ಹಣಕಾಸು ಅಧಿಕಾರಿಗಳು | ವಿಶೇಷ ಆಹ್ವಾನಿತರು |

**ಪ್ರಸ್ತಾವನೆ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರಲ್ಲಿ ಕ್ರಮವಾಗಿ 28ರ ಉಪ ಪ್ರಕರಣ (02) ರಲ್ಲಿ ಉಲ್ಲೇಖಿಸಿರುವಂತೆ, **"ಸಿಂಡಿಕೇಟ್ ಸಭೆಯನ್ನು ಒಂದು ವರ್ಷದಲ್ಲಿ ಕನಿಷ್ಠ ಪಕ್ಷ ಎಂಟು ಸಭೆಗಳನ್ನು ನಡೆಸತಕ್ಕದ್ದು. ಎರಡು ನಿರಂತರ ಸಭೆಗಳ ನಡುವಣ ಅವಧಿಯು ಎಂಟು ವಾರಗಳನ್ನು ಮೀರತಕ್ಕದ್ದಲ್ಲ. ಮಾನ್ಯ ಕುಲಪತಿಯು ವಿಶೇಷ ಸಂದರ್ಭದಲ್ಲಿ ವಿಶೇಷ ಸಭೆಗಳನ್ನು ನಡೆಸಬಹುದು"** ಎಂದು ಉಲ್ಲೇಖಿಸಿರುವ ಹಿನ್ನಲೆಯಲ್ಲಿ ಮಾನ್ಯ ಕುಲಪತಿಯವರು ವಿಶ್ವವಿದ್ಯಾನಿಲಯದ ಆಡಳಿತ ಹಾಗೂ ವಿದ್ಯಾರ್ಥಿಗಳ ಸದುದ್ದೇಶದಿಂದ 2022-23ನೇ ಸಾಲಿನ ಪ್ರಥಮ ವಿಶೇಷ ಸಿಂಡಿಕೇಟ್ ಸಭೆಯನ್ನು ಏರ್ಪಡಿಸಿರುತ್ತಾರೆ.

ವಿಶ್ವವಿದ್ಯಾನಿಲಯದ ಮಾನ್ಯ ಕುಲಪತಿಗಳು ದಿನಾಂಕ: 14.02.2023ರ ಮಂಗಳವಾರ ಅಪರಾಹ್ನ 3:30 ಗಂಟೆಗೆ ಆನ್‌ಲೈನ್ ಮೂಲಕ ನಡೆದ 2022-23ನೇ ಸಾಲಿನ ಪ್ರಥಮ ವಿಶೇಷ ಸಿಂಡಿಕೇಟ್ ಸಭೆಗೆ ಹಾಜರಾದ ಎಲ್ಲಾ ಸದಸ್ಯರುಗಳನ್ನು ಆತ್ಮೀಯವಾಗಿ ಸ್ವಾಗತಿಸಿದರು ತದನಂತರ ಸಭೆಯಲ್ಲಿ ಈ ಕೆಳಕಂಡ ಕಾರ್ಯಸೂಚಿಯ ಬಗ್ಗೆ ಚರ್ಚಿಸಿ ನಿರ್ಣಯವನ್ನು ಕೈಗೊಳ್ಳಲಾಯಿತು.

| ಕ್ರ ಸಂ | ವಿಷಯ ಸಂಖ್ಯೆ | ಕಾರ್ಯಸೂಚಿ ವಿಷಯಗಳು | ನಿರ್ಣಯಗಳು |
|---|---|---|---|
| | | **ಇಂಜಿನಿಯರಿಂಗ್ ವಿಭಾಗ** | |
| 1. | 2022-23:ವಿ.ಸಿಂ.01: ಇಂ.ವಿಭಾಗ-01 | ತುಮಕೂರು ವಿಶ್ವವಿದ್ಯಾನಿಲಯಕ್ಕೆ ವಿವಿಧ ಕಾಮಗಾರಿಗಳಿಗೆ / ಕೆಲಸಗಳಿಗೆ ತಾಂತ್ರಿಕ ಸಲಹಾ ಮತ್ತು ವಾಸ್ತುಶಿಲ್ಪ ಸೇವೆಯನ್ನು ಪಡೆಯುವ ಕುರಿತು. | ತುಮಕೂರು ವಿಶ್ವವಿದ್ಯಾನಿಲಯಕ್ಕೆ ವಿವಿಧ ಕಾಮಗಾರಿಗಳಿಗೆ/ ಕೆಲಸಗಳಿಗೆ ತಾಂತ್ರಿಕ ಸಲಹಾ ಮತ್ತು ವಾಸ್ತುಶಿಲ್ಪಿ ಸೇವೆಯನ್ನು ಪಡೆಯುವ ಸಂಬಂಧ 1) M/s Basanth Constultant 2) M/s Aarna Consulting Engineers 3) M/s Ramamurthy Hombali & Associates 4) M/s ACS Design Consulting Pvt. Ltd. ಇವರುಗಳು ಅನುಬಂಧ-02 ರಲ್ಲಿ ಸಮ್ಮತಿಸಿ ಒಪ್ಪಿಗೆಯನ್ನು ನೀಡಿರುವ ಐಟಂವಾರು ದರಗಳಿಗೆ ವಿಶ್ವವಿದ್ಯಾನಿಲಯವು ಅಂಗೀಕರಿಸಿ, ಸದರಿ ಏಜೆನ್ಸಿಗಳನ್ನು Empanel ಮಾಡಿಕೊಳ್ಳಲು ವಿಶ್ವವಿದ್ಯಾನಿಲಯವು ಜರುಗಿಸಿರುವ ಕ್ರಮವನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿ ಸ್ಥಿರೀಕರಿಸಿತು. |
| | | **ಸಿಬ್ಬಂದಿ ವಿಭಾಗ** | |
| 2. | 2022-23:ವಿ.ಸಿಂ.01: ಸಿಬ್ಬಂದಿ ವಿಭಾಗ-02 | ಬೋಧಕ ಹುದ್ದೆಗಳ ನೇರ ನೇಮಕಾತಿ ಹಾಗೂ ಸಿ.ಎ.ಎಸ್. ಅಡಿಯಲ್ಲಿ ಪದೋನ್ನತಿಯ ಸಂಬಂಧ ಆಯ್ಕೆ ಮಂಡಳಿಗಳನ್ನು ರಚಿಸುವ ಸಂಬಂಧ ವಿಷಯ ಪರಿಣಿತರ ಪಟ್ಟಿಯನ್ನು ಅನುಮೋದಿಸುವ ಕುರಿತು. | ತುಮಕೂರು ವಿಶ್ವವಿದ್ಯಾನಿಲಯದ ಬೋಧಕ ಹುದ್ದೆಗಳ ನೇರ ನೇಮಕಾತಿ ಹಾಗೂ ಸಿ.ಎ.ಎಸ್. (ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಮ್) ಅಡಿಯಲ್ಲಿ ಪದೋನ್ನತಿ ನೀಡಲು ಆಯ್ಕೆ ಮಂಡಳಿಗಳನ್ನು ರಚಿಸುವ ಸಂಬಂಧ ಮೇಲ್ಕಂಡ 20 ವಿಷಯಗಳ ಪರಿಣಿತರ ಪಟ್ಟಿಯನ್ನು ಘನತೆವೆತ್ತ ಮಾನ್ಯ ರಾಜ್ಯಪಾಲರು, ಕರ್ನಾಟಕ ಸರ್ಕಾರ ಇವರಿಗೆ ಕಳುಹಿಸಲು ಸಿಂಡಿಕೇಟ್ ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

| ಸಾಮಾನ್ಯ ಮತ್ತು ಅಭಿವೃದ್ಧಿ ವಿಭಾಗ | | | |
|---|---|---|---|
| 3. | 2022–23:ವಿ.ಸಿಂ.01: ಸಾ&ಅ ವಿಭಾಗ–03 | ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಗೆ ಶ್ರೀ ಅನ್ನಪೂರ್ಣೇಶ್ವರಿ ಮಧ್ಯಾಹ್ನದ ಊಟ ಯೋಜನೆ ಪ್ರಾರಂಭಿಸುವ ಕುರಿತು. | ತುಮಕೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಗೆ ಶ್ರೀ ಅನ್ನಪೂರ್ಣೇಶ್ವರಿ ಮಧ್ಯಾಹ್ನದ ಊಟ ಯೋಜನೆ ಪ್ರಾರಂಭಿಸುವ ಸಂಬಂಧ ಕೂಲಂಕಷವಾಗಿ ಚರ್ಚಿಸಿದ ಸಭೆಯು ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ಹೊರೆ ಇಲ್ಲದಿರುವುದರಿಂದ ಹಾಗೂ ವಿಶ್ವವಿದ್ಯಾನಿಲಯಕ್ಕೆ ವ್ಯಾಸಂಗಕ್ಕಾಗಿ ಆಗಮಿಸುವ ಗ್ರಾಮೀಣ ವಿದ್ಯಾರ್ಥಿಗಳ ಆರೋಗ್ಯ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ ವಿಶ್ವವಿದ್ಯಾನಿಲಯದ ಎಲ್ಲಾ ವಿದ್ಯಾರ್ಥಿಗಳಿಗೆ ಕಡಿಮೆ ದರದಲ್ಲಿ ರೂ.5.00 (ಐದು ರೂಪಾಯಿಗಳು ಮಾತ್ರ) ಗಳಿಗೆ ಊಟವನ್ನು ಒದಗಿಸುವ ಶ್ರೀ ಅನ್ನಪೂರ್ಣೇಶ್ವರಿ ಮಧ್ಯಾಹ್ನದ ಊಟದ ಯೋಜನೆಯನ್ನು ಪ್ರಾರಂಭಿಸಲು ಸಿಂಡಿಕೇಟ್ ಸಭೆಯು ಸರ್ವಾನುಮತದಿಂದ ಸಮ್ಮತಿಸಿ, ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಇಂತಹ ಯೋಜನೆಯು ಇದೇ ಮೊದಲ ಬಾರಿಯ ಪ್ರಯತ್ನವಾಗಿರುವುದನ್ನು ಸಿಂಡಿಕೇಟ್‌ನ ಮಾನ್ಯ ಎಲ್ಲಾ ಸದಸ್ಯರುಗಳು ಅಭಿನಂದಿಸಿ ಶ್ಲಾಘಿಸಿದರು. |

14/2/23 — **ಮಾನ್ಯ ಕುಲಸಚಿವರು**

**ಮಾನ್ಯ ಕುಲಪತಿಗಳು** 14/2/23